ದಿಃ 11.12.2025 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಮುಖ್ಯ ವಿಚಾರಣೆಃ ಶ್ರೀಮತಿ ಕೆ.ವಿ.., ವಕೀಲರಿಂದ ವಾದಿ ಪರವಾಗಿ

1. ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿವೆ ಹಾಗೂ ಸತ್ಯವಾಗಿವೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.
2. ದಾವ ಐಟಂ ನಂಬರ್ 2 ರ ಇ-ಖಾತ extract ಅನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.1 ಎಂದು, 2 ಕಂದಾಯ ಪಾವತಿಯ ರಸೀದಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿ.ಪಿ.2 ಮತ್ತು 3 ಎಂದು, ಮೆಸ್ಕಾಂ ಇಲಾಖೆಯವರು ನೀಡಿದ ವಿದ್ಯುತ್ ಬಿಲ್ಲನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.4 ಎಂದು, 2 ವಿದ್ಯುತ್ ಬಿಲ್ಲನ್ನು ಪಾವತಿಸಿದ ರಸೀದಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿ.ಪಿ.5 ಮತ್ತು 6 ಎಂದು, 12 ಛಾಯಚಿತ್ರಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿ.ಪಿ.7 ರಿಂದ 18 ಎಂದು, ಆ ಛಾಯಚಿತ್ರಗಳಿಗೆ ಸಂಬಂಧಿಸಿದ ಸಿ.ಡಿ ಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.19 ಎಂದು, ಆ ಛಾಯಚಿತ್ರಗಳಿಗೆ ಸಂಬಂಧಿಸಿದ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.20 ಎಂದು, ಆ ಛಾಯಚಿತ್ರಗಳಿಗೆ ಸಂಬಂಧಿಸಿದಂತೆ Studio ದ ಮಾಲೀಕರು ನೀಡಿರುವ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.21 ಎಂದು, ದಿಃ 30.04.1996 ರಂದು ದಾವ ಸ್ವತ್ತಿಗೆ ಸಂಬಂಧಿಸಿದಂತೆ ಕರಿಗೌಡ ರವರು ದೇವೇಗೌಡರವರಿಗೆ ಬರೆದುಕೊಟ್ಟ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.22 ಎಂದು, ದಾವ ಸ್ವತ್ತಿಗೆ ಸಂಬಂಧಿಸಿದ ಆರ್ ಟಿಸಿ ಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.23 ಎಂದು, ದಾವ ಸ್ವತ್ತಿಗೆ ಸಂಬಂಧಿಸಿದ ಮ್ಯುಟೇಷನ್ ರಿಜಿಸ್ಟರ್ ಅನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.24 ಎಂದು, ಗೋಣಿಬೀಡು

ಪೊಲೀಸರಿಗೆ ದಿಃ 26.09.2024 ರಂದು ಸಲ್ಲಿಸಲು ಬರೆದ ದೂರನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.25 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಕಾಲವಕಾಶ ಕೋರಿದ್ದರಿಂದ ಮುಂದೂಡಲಾಯಿತು)

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ